## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1226(1352)

ಸದಸ್ಯರ ಹೆಸರು : ಶ್ರೀ ಎನ್.ರವಿಕುಮಾರ್ (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 22.08.2025

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವರು

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | 15ನೇ ಹಣಕಾಸು ಯೋಜನೆಯಡಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಮೂಲಕ ರಾಜ್ಯದ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆ ಮಾಡಿರುವ ನಿರ್ಬಂಧಿತ ಹಾಗೂ ಅನಿರ್ಬಂಧಿತ ಅನುದಾನದಲ್ಲಿ ಕೆಲವು ಗ್ರಾಮ ಪಂಚಾಯತಿಗಳಿಗೆ ನಿಗಧಿಗಿಂತ ಕಡಿಮೆ ಅನುದಾನ ಹಂಚಿಕೆ ಮಾಡಿ ಕೆಲವು ಗ್ರಾಮ ಪಂಚಾಯಿತಿಗಳಿಗೆ ಅಧಿಕ ಅನುದಾನ ಹಂಚಿಕೆ ಮಾಡಿರುವುದಕ್ಕೆ ಕಾರಣಗಳೇನು; | 2024-25ನೇ ಸಾಲಿಗೆ 15ನೇ ಹಣಕಾಸು ಆಯೋಗದ ಅನುದಾನದಲ್ಲಿ ಗ್ರಾಮ ಪಂಚಾಯಿತಿಗಳಿಗೆ ರೂ.2241.45 ಕೋಟಿಗಳನ್ನು ನಿಗಧಿಪಡಿಸಲಾಗಿರುತ್ತದೆ. ಈ ಅನುದಾನವನ್ನು ಶೇ.90ರಷ್ಟು ಜನಸಂಖ್ಯೆಯ ಆಧಾರದ ಮೇಲೆ ಶೇ.10ರಷ್ಟು ಭೌಗೋಳಿಕ ವಿಸ್ತೀರ್ಣದ ಆಧಾರದ ಮೇಲೆ ಹಂಚಿಕೆ ಮಾಡಲಾಗಿರುತ್ತದೆ.<br><br>2024-25ನೇ ಸಾಲಿನಲ್ಲಿ 15ನೇ ಹಣಕಾಸು ಆಯೋಗದ ಅನುದಾನದ ಎರಡನೇ ಕಂತಿನ ನಿರ್ಬಂಧಿತ ಅನುದಾನ ರೂ.64.88 ಕೋಟಿಗಳು ಮತ್ತು ಅನಿರ್ಬಂಧಿತ ಅನುದಾನ ರೂ.43.32 ಕೋಟಿಗಳು ಕೇಂದ್ರ ಸರ್ಕಾರದಿಂದ ಕಡಿಮೆ ಬಿಡುಗಡೆಯಾಗಿರುವುದರಿಂದ ಎಲ್ಲಾ ಗ್ರಾಮ ಪಂಚಾಯಿತಿಗಳಿಗೂ ಕಡಿಮೆ ಅನುದಾನ ಹಂಚಿಕೆಯಾಗಿರುತ್ತದೆ. |
| ಆ) | 2023-24ನೇ ಸಾಲಿನಲ್ಲಿ ಗ್ರಾಮ ಪಂಚಾಯತಿಗಳಿಗೆ ಹಂಚಿಕೆ ಮಾಡಿರುವ ಅನುದಾನವನ್ನು ಪುನರ್ ಪರಿಷ್ಕರಣೆ ಮಾಡಿರುವುದಕ್ಕೆ ಕಾರಣವೇನು; | 2023-24ನೇ ಸಾಲಿನಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಹಳ್ಳಿಗಳ ಸೇರ್ಪಡೆ ಮತ್ತು ವಿಭಜನೆ, ವರ್ಗಾವಣೆಗಾಗಿ ಸ್ವೀಕೃತವಾದ ಮನವಿಗಳನ್ನು ಪರಿಗಣಿಸಿ ಅನುದಾನದ ಹಂಚಿಕೆಯನ್ನು ಪರಿಷ್ಕರಿಸಿ ಮರು ಹಂಚಿಕೆ ಮಾಡಲಾಗಿರುತ್ತದೆ. |

| | | |
|---|---|---|
| (ಇ) | 2024-25ನೇ ಸಾಲಿನಲ್ಲಿ ರಾಜ್ಯದ ಪ್ರತೀ ಗ್ರಾಮ ಪಂಚಾಯತಿಗಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಯ ನಿಗಧಿತ ಮೊತ್ತಕ್ಕಿಂತ ಹಾಗೂ ಸರ್ಕಾರದ ನಿಯಮಾವಳಿಗಿಂತ ಹೆಚ್ಚುವರಿ ಅನುದಾನವನ್ನು ಹಲವಾರು ಗ್ರಾಮ ಪಂಚಾಯತಿಗಳಿಗೆ ಹಂಚಿಕೆ ಮಾಡಿರುವುದಕ್ಕೆ ಕಾರಣವೇನು; | 2024-25ನೇ ಸಾಲಿನ ಅನುದಾನವನ್ನು ಹಂಚಿಕೆ ಮಾಡುವ ಸಂದರ್ಭದಲ್ಲಿ ತಾಂತ್ರಿಕ ದೋಷದಿಂದಾಗಿ ಕೆಲವು ಗ್ರಾಮ ಪಂಚಾಯತಿಗಳ ಜನಸಂಖ್ಯೆಯು ದ್ವಿಗುಣವಾಗಿ ತೋರಿಸಿರುತ್ತದೆ. ಇದರಿಂದಾಗಿ ಗ್ರಾಮ ಪಂಚಾಯತಿಗಳಿಗೆ ಅನುದಾನ ಹಂಚಿಕೆಯಲ್ಲಿ ವ್ಯತ್ಯಾಸವಾಗಿದ್ದು, ತಕ್ಷಣವೇ ದೋಷವನ್ನು ಸರಿಪಡಿಸಿ, ಪರಿಷ್ಕೃತ ಅನುದಾನ ಹಂಚಿಕೆ ಪತ್ರ ಹೊರಡಿಸಲಾಗಿರುತ್ತದೆ ಮತ್ತು ಪರಿಷ್ಕೃತ ಹಂಚಿಕೆಯಂತೆಯೇ ಅನುದಾನ ಬಿಡುಗಡೆ ಮಾಡಲಾಗಿರುತ್ತದೆ. |
| (ಈ) | ಇ-ಗ್ರಾಮ ಸ್ವರಾಜ್ಯ ತಂತ್ರಾಂಶದಲ್ಲಿ ಗ್ರಾಮ ಪಂಚಾಯತಿಗಳಿಗೆ ಹಂಚಿಕೆ ಮಾಡಿರುವ ಅನುದಾನದ ಮೊತ್ತವನ್ನು ಅಳವಡಿಸುವ ಬದಲು ಕಡಿಮೆ ಮೊತ್ತವನ್ನು ಅಳವಡಿಕೆ ಮಾಡಿರುವುದಕ್ಕೆ ಕಾರಣವೇನು; | ಇ-ಗ್ರಾಮ ಸ್ವರಾಜ್ ತಂತ್ರಾಂಶದಲ್ಲಿ ಮುಂದಿನ ಆರ್ಥಿಕ ವರ್ಷದ ಕ್ರಿಯಾಯೋಜನೆಯನ್ನು ಹಿಂದಿನ ಸಾಲಿನ 31ನೇ ಮಾರ್ಚ್‌ರೊಳಗೆ ಮಾಡಬೇಕಾಗಿರುವುದರಿಂದ, ಹಿಂದಿನ ಸಾಲಿನಲ್ಲಿ ನಿಗದಿಪಡಿಸಿರುವ ಅನುದಾನದ ವಿವರಗಳನ್ನು ಇ-ಗ್ರಾಮ ಸ್ವರಾಜ್ ತಂತ್ರಾಂಶದಲ್ಲಿ ಕೇಂದ್ರ ಪಂಚಾಯತ್ ರಾಜ್ ಮಂತ್ರಾಲಯ ವತಿಯಿಂದ ಪೋರ್ಟ್ ಮಾಡಲಾಗಿರುತ್ತದೆ. |
| (ಉ) | 2023-24 ಹಾಗೂ 2024-25ನೇ ಸಾಲಿನಲ್ಲಿ ಗ್ರಾಮ ಪಂಚಾಯತಿಗಳಿಗೆ ಹಂಚಿಕೆ ಮಾಡಿರುವ ಅನುದಾನದ ಮೊತ್ತ ಹಾಗೂ ಇ-ಗ್ರಾಮ ಸ್ವರಾಜ್ಯ ತಂತ್ರಾಂಶದಲ್ಲಿ ಅಳವಡಿಕೆ ಮಾಡಿರುವ ಮೊತ್ತದ ವಿವರಗಳೇನು? (ಗ್ರಾಮ ಪಂಚಾಯತಿವಾರು ಮಾಹಿತಿ ಒದಗಿಸುವುದು) | 2023-24 ಹಾಗೂ 2024-25 ಅನುದಾನದ ಮೊತ್ತ ಹಾಗೂ ಇ-ಗ್ರಾಮ ಸ್ವರಾಜ್ಯ ತಂತ್ರಾಂಶದಲ್ಲಿ ಅಳವಡಿಕೆ ಮಾಡಿರುವ ಮೊತ್ತದ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ. |

ಸಂಖ್ಯೆ: ಗ್ರಾಅಪಂರಾ 152 ಜಿಪಸ 2025

(ಪ್ರಿಯಾಂಕ್ ಖರ್ಗೆ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್

ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.